# Bangalore
# Regional Kannada
# 20.04.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯದಲ್ಲಿ ೨ನೇ ಹಂತದ ಲೋಕಸಭಾ ಚುನಾವಣೆ - ನಾಮಪತ್ರ ಹಿಂಪಡೆಯಲು ಸೋಮವಾರ ಕೊನೆಯ ದಿನ

೨. ಎನ್‌ಡಿಎ ಅಧಿಕಾರಕ್ಕೆ ಬಂದರೆ ಉಚಿತ ಪಡಿತರ ಇನ್ನು ೫ ವರ್ಷ ಮುಂದುವರಿಕೆ ; ಬಿಜೆಪಿ ಹಿರಿಯ ಮುಖಂಡ ಹಾಗೂ ಪ್ರಧಾನಿ ನರೇಂದ್ರ ಮೋದಿ

೩. ಮಂಡ್ಯದ ಕೆ.ಆರ್. ನಗರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಬಿರುಸಿನ ಪ್ರಚಾರ

೪. ರಾಜ್ಯದ ಹಲವೆಡೆ ವರ್ಷಧಾರೆ ; ಇನ್ನು ೨ ದಿನ ಗುಡುಗು ಸಹಿತ ಮಳೆ ಸಾಧ್ಯತೆ : ಹವಾಮಾನ ಇಲಾಖೆ ಮುನ್ಸೂಚನೆ

<><*<><>*><>

ರಾಜ್ಯದಲ್ಲಿ ೨ನೇ ಹಂತದ ಲೋಕಸಭಾ ಚುನಾವಣೆಯ ನಾಮಪತ್ರ ಸಲ್ಲಿಕೆಗೆ ಕೊನೆಯ ದಿನಾಂಕ ಮುಗಿದಿದ್ದು, ೧೪ ಸ್ಥಾನಗಳಿಗಾಗಿ ಒಟ್ಟು ೩೩೭ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಮುಖ್ಯ ಚುನಾವಣಾ ಕಚೇರಿ ಬಿಡುಗಡೆ ಮಾಡಿದ ಅಂಕಿಅಂಶಗಳ ಪ್ರಕಾರ, ನಾಮಪತ್ರ ಸಲ್ಲಿಕೆ ಪ್ರಾರಂಭವಾದ ಇದೇ ೧೨ ರಿಂದ ೩೮೯ ಪುರುಷ ಮತ್ತು ೨೮ ಮಹಿಳಾ ಅಭ್ಯರ್ಥಿಗಳು ೫೦೩ ನಾಮಪತ್ರ ಸಲ್ಲಿಸಿದ್ದಾರೆ. ದಾವಣಗೆರೆಯಿಂದ ಅತಿ ಹೆಚ್ಚು ೪೦ ಅಭ್ಯರ್ಥಿಗಳು ಮತ್ತು ಪರಿಶಿಷ್ಟ ಪಂಗಡಕ್ಕೆ ಮೀಸಲಾದ ಕ್ಷೇತ್ರ ಬಳ್ಳಾರಿಯಿಂದ ಕನಿಷ್ಠ ೧೧ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ನಾಮಪತ್ರ ಹಿಂಪಡೆಯಲು ಇದೇ ೨೨ ಕೊನೆಯ ದಿನವಾಗಿದ್ದು, ಮೇ ೭ ರಂದು ಚುನಾವಣೆ ನಡೆಯಲಿದೆ. ೧೪ ಲೋಕಸಭಾ ಸ್ಥಾನಗಳಿಗೆ ಮೊದಲನೇ ಹಂತದ ಚುನಾವಣೆಗೆ ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆ ಮುಕ್ತಾಯವಾಗಿದೆ. ಮನೆಯಿಂದಲೇ ಮತದಾನ ಮಾಡುವುದನ್ನು ಆಯ್ಕೆ ಮಾಡಿಕೊಂಡಿದ್ದ ೩೬ ಸಾವಿರದ ೬೮೯ ಮತದಾರರ ಪೈಕಿ ೮೫ ವರ್ಷ ಮೇಲ್ಪಟ್ಟ ೩೫ ಸಾವಿರದ ೧೩೧ ಮತದಾರರು ಹಕ್ಕು ಚಲಾಯಿಸಿದ್ದಾರೆ. ಸುಮಾರು ೯೬ ಪ್ರತಿಶತ ವಿಶೇಷ ಚೇತನ ಮತದಾರರು ತಮ್ಮ ಮನೆಗಳಿಂದಲೇ ಮತದಾನ ಮಾಡಿದ್ದಾರೆ. ಎರಡೂ ವಿಭಾಗಗಳಲ್ಲಿ ಒಟ್ಟು ೪೬ ಸಾವಿರದ ೮೧೦ ಮತದಾರರು ತಮ್ಮ ಮನೆಗಳಿಂದಲೇ ಹಕ್ಕು ಚಲಾಯಿಸಿದ್ದಾರೆ. ಸುರಪುರ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಕಾಂಗ್ರೆಸ್, ಬಿಜೆಪಿ, ಸಮಾಜವಾದಿ ಜನತಾ ಪಕ್ಷ ಮತ್ತು ನಾಲ್ವರು ಪಕ್ಷೇತರರು ಸೇರಿದಂತೆ ಏಳು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಕಾಂಗ್ರೆಸ್ ಶಾಸಕ ರಾಜಾ ವೆಂಕಟಪ್ಪ ನಾಯ್ಕ್ ನಿಧನದಿಂದ ಸುರಪುರ ವಿಧಾನಸಭಾ ಕ್ಷೇತ್ರ ತೆರವಾಗಿತ್ತು.

<><*<><>*><>

ರಾಜ್ಯ ಪ್ರವಾಸದಲ್ಲಿರುವ ಬಿಜೆಪಿ ಹಿರಿಯ ಮುಖಂಡ ಹಾಗೂ ಪ್ರಧಾನಿ ನರೇಂದ್ರ ಮೋದಿ, ಚಿಕ್ಕಬಳ್ಳಾಪುರದಲ್ಲಿ ಎನ್‌ಡಿಎ ಅಭ್ಯರ್ಥಿಗಳ ಪರ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ರೈತ ವಿರೋಧಿ ಕಾಂಗ್ರೆಸ್‌ಗೆ ಇಲ್ಲಿನ ಜನ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಹೇಳಿದರು. ಕರ್ನಾಟಕದ ಅಭಿವೃದ್ಧಿಗೆ ಕೇಂದ್ರದ ಎನ್‌ಡಿಎ ಸರ್ಕಾರ ಬದ್ಧವಾಗಿದ್ದು, ಎನ್‌ಡಿಎ ಅಭ್ಯರ್ಥಿಗಳನ್ನು ಗೆಲ್ಲಿಸಿ ಎಂದು ಮನವಿ ಮಾಡಿದರು. ಈಗಾಗಲೇ ಬಡವರಿಗಾಗಿ ೧೦ ಕೋಟಿ ಮನೆಗಳನ್ನು ನಿರ್ಮಿಸಿಕೊಡಲಾಗಿದ್ದು, ಇನ್ನು ೩ ಕೋಟಿ ಮನೆಗಳನ್ನು ನಿರ್ಮಿಸಿಕೊಡುವ ಮೂಲಕ ವಸತಿರಹಿತರಿಗೆ ವಸತಿ ಸೌಲಭ್ಯ ಮಾಡಿಕೊಡಲಾಗುವುದು. ಉಚಿತ ಪಡಿತರವನ್ನು ಮುಂದಿನ ೫ ವರ್ಷಗಳ ಕಾಲ ಮುಂದುವರೆಸಲಾಗುವುದು ಎಂದು ಭರವಸೆ ನೀಡಿದರು.

ಧ್ವನಿ : ನರೇಂದ್ರ ಮೋದಿ

ಮಂಡ್ಯದ ಕೆ.ಆರ್. ನಗರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು. ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ ಅವರ ಗೆಲುವು ಶತಸಿದ್ಧ ಎಂದು ಹೇಳಿದರು. ಬರ ಪರಿಹಾರ ನೀಡದ ಕೇಂದ್ರ ಸರ್ಕಾರದ ವಿರುದ್ಧ ಅವರು ಕಿಡಿಕಾರಿದರು.

ಧ್ವನಿ : ಸಿದ್ದರಾಮಯ್ಯ

**<><*<><>*><>**

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಬೆಂಗಳೂರಿನ ಶೇಷಾದ್ರಿಪುರಂ ಕಾಲೇಜಿನಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ಈ ವೇಳೆ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಲೋಕಸಭೆ ಚುನಾವಣೆಯಲ್ಲಿ ತಪ್ಪದೆ ಎಲ್ಲರೂ ಮತ ಚಲಾಯಿಸಬೇಕು ಎಂದು ಹೇಳಿದರು. ಲೋಕಸಭಾ ಚುನಾವಣೆ ಅಂಗವಾಗಿ ಬೆಂಗಳೂರಿನ ಡಾ. ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಎನ್.ಸಿ.ಸಿ, ಮತ್ತು ಎನ್.ಎಸ್.ಎಸ್ ಹಾಗೂ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸ್ವಯಂಸೇವಕರಿಗಾಗಿ ಹಮ್ಮಿಕೊಂಡಿದ್ದ ಸರದಿ ನಿರ್ವಹಣಾ ತರಬೇತಿ ಕಾರ್ಯಕ್ರಮವನ್ನು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಉದ್ಘಾಟಿಸಿದರು. ದಾನಗಳಲ್ಲಿ ಶ್ರೇ? ದಾನ ಮತದಾನ. ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಹಾಸ್ಯ ಕಲಾವಿದ ಹಾಗೂ ಯಾದಗಿರಿ ಜಿಲ್ಲಾ ಚುನಾವಣಾ ರಾಯಭಾರಿ ಬಸವರಾಜ್ ಮಹಾಮನಿ ಮನವಿ ಮಾಡಿದ್ದಾರೆ. ದಾವಣಗೆರೆ ಲೋಕಸಭಾ ಕ್ಷೇತ್ರದಿಂದ ಸಲ್ಲಿಕೆಯಾಗಿದ್ದ ೫೪ ನಾಮಪತ್ರಗಳ ಪೈಕಿ ೧೨ ನಾಮಪತ್ರಗಳು ತಿರಸ್ಕೃತಗೊಂಡಿದ್ದು, ೪೨ ನಾಮಪತ್ರಗಳು ಕ್ರಮಬದ್ಧವಾಗಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದ್ದಾರೆ.

ಹಾವೇರಿ ಲೋಕಸಭಾ ಚುನಾವಣೆಗೆ ಸಲ್ಲಿಕೆಯಾಗಿದ್ದ ೨೬ ಅಭ್ಯರ್ಥಿಗಳ ನಾಮಪತ್ರಗಳ ಪೈಕಿ ೧೪ ಅಂಗೀಕಾರಗೊಂಡಿದ್ದು, ೧೨ ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಂಡಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ರಘುನಂದನ್ ಮೂರ್ತಿ ತಿಳಿಸಿದ್ದಾರೆ.

ಪ್ರತಿಯೊಬ್ಬ ನಾಗರಿಕರು ಮೇ ೦೭ರಂದು ನಡೆಯುವ ಯಾದಗಿರಿ ಜಿಲ್ಲೆಯ ಸುರಪುರ ವಿಧಾನಸಭೆ ಉಪ ಚುನಾವಣೆ ಹಾಗೂ ರಾಯಚೂರು ಲೋಕಸಭೆ ಚುನಾವಣೆಯಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಯಾದಗಿರಿ ಜಿಲ್ಲೆಯ ಸುರಪುರ ಸೆಕ್ಟರ್ ಅಧಿಕಾರಿ ಪ್ರವೀಣಕುಮಾರ್ ಹೇಳಿದ್ದಾರೆ. ಮತದಾನ ನಮ್ಮ ಹಕ್ಕಾಗಿದ್ದು, ಯಾವುದೇ ಹಣ, ಆಮಿ?ಕ್ಕೆ ಒಳಗಾಗದೇ ಕಡ್ಡಾಯವಾಗಿ ಮತದಾನ ಮಾಡಿ ದೇಶದ ಪ್ರಜಾಪ್ರಭುತ್ವವನ್ನು ಗಟ್ಟಿಗೊಳಿಸಬೇಕು ಎಂದು ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಚುನಾವಣಾ ಸಿಬ್ಬಂದಿಗೆ ಎರಡನೇ ಹಂತದ ಚುನಾವಣಾ ತರಬೇತಿ ಇಂದು ನಡೆಯಿತ. ಜಿಲ್ಲಾಧಿಕಾರಿ ಡಾ. ಎನ್. ಶಿವಶಂಕರ ತರಬೇತಿ ಕೇಂದ್ರಗಳಿಗೆ ಭೇಟಿ ನೀಡಿ, ತರಬೇತಿ ಕಾರ್ಯ ಪರಿಶೀಲಿಸಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾರರೆಲ್ಲ ತಮ್ಮ ಹಕ್ಕು ಹಾಗೂ ಜವಾಬ್ದಾರಿಗಳನ್ನು ಅರಿತು ತಪ್ಪದೇ ಮತದಾನ ಮಾಡುವಂತೆ ಬಾಗಲಕೋಟೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ವಿಜಯ ನೇರಳೆ ಹೇಳಿದರು. ಮತದಾರರ ಜಾಗೃತಿ ಅಭಿಯಾನದ ಜಾಥಾಕ್ಕೆ ಚಾಲನೆ ನೀಡಿದ ಅವರು, ಅರ್ಹ ಮತದಾರರೆಲ್ಲ ತಪ್ಪದೇ ತಮ್ಮ ಹಕ್ಕು ಚಲಾಯಿಸಬೇಕು ಎಂದು ಹೇಳಿದರು.

ಮತದಾನ ಸೇರಿದಂತೆ ಚುನಾವಣೆ ಕಾರ್ಯಕ್ಕೆ ನೇಮಕಗೊಂಡ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ಒತ್ತಡ ರಹಿತವಾಗಿ ಚುನಾವಣೆ ಕಾರ್ಯ ನಿರ್ವಹಿಸುವಂತೆ ಚಿತ್ರದುರ್ಗ ಜಿಲ್ಲಾ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸಲಹೆ ನೀಡಿದ್ದಾರೆ.

ಉತ್ತರಕನ್ನಡ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆ-೨೦೨೪ ಕ್ಕೆ ಸಂಬಂಧಿಸಿದಂತೆ, ಈಗಾಗಲೇ ನಾಮಪತ್ರಗಳನ್ನು ಸಲ್ಲಿಸಿದ್ದ ೬ ಅಭ್ಯರ್ಥಿಗಳ ಒಟ್ಟು ೧೭ ನಾಮಪತ್ರಗಳು ತಿರಸ್ಕೃತಗೊಂಡಿದ್ದು, ನಾಮಪತ್ರಗಳ ಪರಿಶೀಲನೆಯ ನಂತರ ೧೩ ಅಭ್ಯರ್ಥಿಗಳ ನಾಮಪತ್ರಗಳು ಕ್ರಮಬದ್ದವಾಗಿವೆ ಎಂದು ಜಿಲ್ಲಾ ಚುನಾವಣಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ.

ರಾಯಚೂರಿನಲ್ಲಿ ನಾಮಪತ್ರಗಳ ಪರಿಶೀಲನೆ ನಡೆದಿದ್ದು, ಪರಿಶೀಲನೆಯ ನಂತರ ಒಟ್ಟು ೧೦ ಅಭ್ಯರ್ಥಿಗಳ ನಾಮಪತ್ರಗಳು ಸ್ವೀಕೃತಗೊಂಡಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ಲೋಕಸಭಾ ಚುನಾವಣೆಯ ಮತದಾನ ಪ್ರಮಾಣ ಹೆಚ್ಚಿಸಲು ಜಿಲ್ಲಾಡಳಿತ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. ರಾಮನಗರ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಆಯೋಜಿಸಲಾಗಿದ್ದ ಸೆಲ್ಫಿ ವಿತ್ ವೋಟಿಂಗ್ ಮತ್ತು ಸಹಿ ಸಂಗ್ರಹ ಅಭಿಯಾನಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಚಾಲನೆ ನೀಡಿದರು. ಮಂಡ್ಯ ಜಿಲ್ಲೆಯಲ್ಲಿ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಡಾ.ಕುಮಾರ್ ಅಧ್ಯಕ್ಷತೆಯಲ್ಲಿ ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ೧೮ ವರ್ಷ ಮೇಲ್ಪಟ್ಟವರು ಮತ್ತು ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಂಡವರು ಮತದಾನ ಮಾಡುವುದು ಕಡ್ಡಾಯವಾಗಿದೆ ಎಂದರು. ಕೋಲಾರ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮುಳಬಾಗಿಲು ತಾಲ್ಲೂಕು ಆಡಳಿತ ವತಿಯಿಂದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪದ್ಮ ಬಸಂತಪ್ಪ ಗಾಳಿಪಟ ಹಾರಿಸುವ ಮೂಲಕ ವಿಶೇಷವಾಗಿ ಮತದಾನ ಜಾಗೃತಿ ಮೂಡಿಸಿದರು. ಇದೇ ೨೬ ರಂದು ಲೋಕಸಭಾ ಚುನಾವಣೆ ನಡೆಯಲಿದ್ದು, ಮತದಾನದ ದಿನದಂದು ಕಡ್ಡಾಯವಾಗಿ ಮತಗಟ್ಟೆಗಳಿಗೆ ಬಂದು ಎಲ್ಲರೂ ಮತದಾನ ಮಾಡಿ ಎಂದು ಭಾರತ ಚುನಾವಣಾ ಆಯೋಗದ ರಾಜ್ಯ ಸ್ವೀಪ್ ನೋಡಲ್ ಅಧಿಕಾರಿ ಪಿ.ಎಸ್. ವಸ್ತ್ರದ್ ಮೈಸೂರಿನಲ್ಲಿ ತಿಳಿಸಿದ್ದಾರೆ.

<><*<><>*><>

ರಾಜ್ಯದಲ್ಲಿ ದಕ್ಷಿಣ ಗಡಿಭಾಗವಾದ ಚಾಮರಾಜನಗರ ಲೋಕಸಭಾ ಮೀಸಲು ಕ್ಷೇತ್ರಕ್ಕೆ ಇದೇ ೨೬ರಂದು ಮತದಾನ ನಡೆಯಲಿದೆ. ಚುನಾವಣಾ ಸಂಬಂಧ ಅಧಿಕಾರಿಗಳು ನ್ಯಾಯಸಮ್ಮತ ಮತ್ತು ಶಾಂತಿಯುತ ಮತದಾನಕ್ಕೆ ಅಗತ್ಯ ಕ್ರಮಕೈಗೊಂಡಿದ್ದಾರೆ. ಚಾಮರಾಜನಗರ ಲೋಕಸಭಾ ಕ್ಷೇತ್ರ ಪರಿಶಿಷ್ಟ ಜಾತಿ ಮೀಸಲು ಕ್ಷೇತ್ರವಾಗಿದೆ. ಇದರ ವ್ಯಾಪ್ತಿಗೆ ಹನೂರು, ಕೊಳ್ಳೇಗಾಲ, ಚಾಮರಾಜನಗರ, ಗುಂಡ್ಲುಪೇಟೆ ಹಾಗೂ ಮೈಸೂರು ಜಿಲ್ಲೆಯ ಹೆಗ್ಗಡದೇವನಕೋಟೆ, ನಂಜನಗೂಡು, ವರುಣ, ತಿರುಮಕೂಡಲು ನರಸೀಪುರ ವಿಧಾನಸಭಾ ಕ್ಷೇತ್ರಗಳು ಒಳಪಡಲಿವೆ. ಒಟ್ಟು ೮ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ೮ ಲಕ್ಷ ೬೯ ಸಾವಿರದ ೩೮೯ ಪುರುಷರು, ೮ ಲಕ್ಷ ೮೮ ಸಾವಿರದ ೧೧೩ ಮಹಿಳೆಯರು, ಇತರೆ ೧೧೪ ಮತದಾರರು ಸೇರಿದಂತೆ ಒಟ್ಟು ೧೭ ಲಕ್ಷ ೫೭ ಸಾವಿರದ ೬೧೬ ಮತದಾರರು ಮತ ಚಲಾಯಿಸುವ ಹಕ್ಕು ಹೊಂದಿದ್ದಾರೆ. ಚಾಮರಾಜನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಹಾಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿನಿಧಿಸುವ ವರುಣ ವಿಧಾನ ಸಭಾ ಕ್ಷೇತ್ರ ಸೇರ್ಪಡೆಗೊಂಡಿರುವುದರಿಂದ ಈ ಕ್ಷೇತ್ರವು ರಾಜ್ಯದ ಗಮನ ಸೆಳೆದಿದೆ. ಈ ಬಾರಿಯ ಚುನಾವಣೆಯಲ್ಲಿ ಹೊಸಬರು ತಮ್ಮ ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ. ಕಾಂಗ್ರೆಸ್ ಪಕ್ಷದಿಂದ ಸುನಿಲ್ ಬೋಸ್, ಬಿಜೆಪಿ, ಜೆಡಿಎಸ್ ಮೈತ್ರಿಕೂಟದಿಂದ ಆರ್.ಬಾಲರಾಜು ಕಣದಲ್ಲಿದ್ದಾರೆ. ಮುಖ್ಯಮಂತ್ರಿಗಳ ತವರು ಕ್ಷೇತ್ರ ವರುಣ ಸೇರಿದಂತೆ ೮ ವಿಧಾನ ಸಭಾ ಕ್ಷೇತ್ರಗಳಲ್ಲಿ ೭ ಶಾಸಕರು ಕಾಂಗ್ರೆಸ್ ಪಕ್ಷದವರಿದ್ದು, ಹನೂರು ಕ್ಷೇತ್ರದಲ್ಲಿ ಮಾತ್ರ ಜೆಡಿಎಸ್ ಶಾಸಕರಿದ್ದಾರೆ. ಈ ಸಲದ ಚುನಾವಣೆಯಲ್ಲಿ ಕಾಂಗ್ರೆಸ್ ಮತ್ತು ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿಗಳ ನಡುವೆ ನೇರಾನೇರ ಹಣಾಹಣಿ ಇದ್ದು ಫಲಿತಾಂಶ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಈ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ೨ ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಮತದಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಯುವ ರಾಯಭಾರಿಗಳನ್ನಾಗಿ ಚಲನಚಿತ್ರ ನಟರಾದ ಕಾರ್ತಿಕ್ ಮಹೇಶ್ ಹಾಗೂ ಚಲನಚಿತ್ರ ನಟರು ಹಾಗೂ ನಿರ್ದೇಶಕ ನಾಗಭೂಷಣ್, ತೃತೀಯ ಲಿಂಗಿಗಳ ರಾಯಭಾರಿಯಾಗಿ ಸಮತಾ ಸೊಸೈಟಿಯ ಅಧ್ಯಕ್ಷರಾದ ದೀಪಾ ಬುದ್ದೆ ಅವರನ್ನು ನೇಮಕ ಮಾಡಲಾಗಿದೆ. ಮತದಾನ ಪ್ರಕ್ರಿಯೆಯನ್ನು ಪರಿಣಾಮಕಾರಿಯಾಗಿಸಲು ಈ ಬಾರಿ ಚಾಮರಾಜನಗರ ಜಿಲ್ಲೆಯಲ್ಲಿ ೪೬ ಮತಗಟ್ಟೆಗಳನ್ನು ವಿಶೇಷ ಮತಗಟ್ಟೆಗಳಾಗಿ ಪರಿಗಣಿಸಲಾಗಿದೆ. ಮಹಿಳೆಯರ ವಿಶೇಷತೆ ಪ್ರತಿಬಿಂಬಿಸುವ ವಿವಿಧ ಬಣ್ಣಗಳ ಚಿತ್ತಾರದಿಂದ ಕೂಡಿದ 'ಸಖಿ ಸೌರಭ' ಮತಗಟ್ಟೆಗಳು, ಯುವ ಮತದಾರರನ್ನು ಮತದಾನಕ್ಕೆ ಪ್ರೇರೇಪಿಸುವ ಸಲುವಾಗಿ ಜಿಲ್ಲೆಯ ಯುವ ರಾಯಭಾರಿಗಳ ಭಾವಚಿತ್ರಗಳನ್ನುಳ್ಳ 'ಯುವ ಸೌರಭ' ಮತಗಟ್ಟೆ, ದೇಶದ ಬೆನ್ನೆಲುಬಾಗಿರುವ ರೈತರಿಗೆ ಗೌರವಿಸುವ ಸಲುವಾಗಿ ಸಿರಿಧಾನ್ಯಗಳನ್ನೊಳಗೊಂಡಂತೆ ವಿವಿಧ ಹೂ ಗಿಡಗಳನ್ನು ಬೆಳೆಸಿ ಅನ್ನದಾತ ಮತಗಟ್ಟೆ, ಜಿಲ್ಲೆಯು ಹೆಚ್ಚಿನ ಅರಣ್ಯ ಪ್ರದೇಶ ಹೊಂದಿರುವುದರಿಂದ ಹಸಿರು ಮತಗಟ್ಟೆ, ಬುಡಕಟ್ಟು ಜನರು ಹೆಚ್ಚಾಗಿ ವಾಸಿಸುವ ಮತಗಟ್ಟೆಗಳನ್ನು ಸಂಕಲ್ಪ

ಮತಗಟ್ಟೆಗಳು, ಜಿಲ್ಲೆಯ ಜಾನಪದ ಕಲಾ ಪರಂಪರೆಯನ್ನು ಬಿಂಬಿಸುವಂತಹ ಸಾಂಸ್ಕೃತಿಕ ಮತಗಟ್ಟೆ ಹಾಗೂ ವಿಶೇಷ ಚೇತನರಿಗಾಗಿ ಮತದಾನಕ್ಕೆ ಸೆಳೆಯಲು ಹೊಂಬೆಳಕು ಮತಗಟ್ಟೆಗಳನ್ನು ತೆರೆಯಲು ನಿರ್ಧರಿಸಲಾಗಿದೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜಧಾನಿ ಬೆಂಗಳೂರು ಸೇರಿದಂತೆ ಕರಾವಳಿಯ ಹಲವು ಕಡೆಗಳಲ್ಲಿ, ದಕ್ಷಿಣ ಒಳನಾಡಿನ ಕೆಲವು ಕಡೆಗಳಲ್ಲಿ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆ ಮಳೆಯಾಗಿದೆ.

ಪ್ರಮುಖವಾಗಿ ಉತ್ತರಕನ್ನಡ ಜಿಲ್ಲೆಯ ಕುಮಟಾದಲ್ಲಿ ೧೩ ಸೆಂಟಿಮೀಟರ್, ಗೋಕರ್ಣದಲ್ಲಿ ೧೦, ಮಂಕಿಯಲ್ಲಿ ೮, ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ಮತ್ತು ಕಮ್ಮರಡಿಯಲ್ಲಿ ತಲಾ ೭ ಸೆಂಟಿಮೀಟರ್ ಮಳೆಯಾಗಿದೆ. ರಾಜ್ಯದಲ್ಲಿ ಗರಿಷ್ಠ ತಾಪಮಾನ ೪೦.೭ ಡಿಗ್ರಿ ಸೆಲ್ಸಿಯಸ್ ಚಿಕ್ಕನಹಳ್ಳಿಯಲ್ಲಿ ದಾಖಲಾಗಿದೆ.

ಇನ್ನು, ದಕ್ಷಿಣ ಒಳನಾಡಿನ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ, ಕಲಬುರ್ಗಿ, ಬೀದರ್, ಬೆಳಗಾವಿ, ಚಿಕ್ಕಮಗಳೂರು, ಹಾಸನ, ಕೊಡಗು ಮತು ಶಿವಮೊಗ್ಗ ಜಿಲ್ಲೆಯ ಒಂದೆರಡು ಕಡೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರಿನಲ್ಲಿ ಮೋಡ ಕವಿದ ವಾತಾವರಣ ಇರಲಿದೆ. ರಾತ್ರಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಗರಿಷ್ಠ ತಾಪಮಾನ ೩೪, ಕನಿಷ್ಠ ತಾಪಮಾನ ೨೩ ಡಿಗ್ರಿ ಸೆಲ್ಸಿಯಸ್ ದಾಖಲಾಗುವ ಸಂಭವವಿದೆ.

**<><*<><>*><>**

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಮುಂಗಾರು ಮಳೆ ಸಮಯದಲ್ಲಿ ಯಾವುದೇ ರೀತಿಯ ಅವಘಡಗಳು ಸಂಭವಿಸದಂತೆ ಮುಂಜಾಗ್ರತಾ ಕ್ರಮವಾಗಿ ಶಾಲಾ ಕಟ್ಟಡಗಳು ಸೇರಿದಂತೆ ಜಿಲ್ಲೆಯ ಎಲ್ಲಾ ಸರ್ಕಾರಿ ಕಟ್ಟಡಗಳ ಮೇಲ್ಛಾವಣಿಗಳನ್ನು ಖುದ್ದಾಗಿ ಪರಿಶೀಲಿಸಿ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ರಘುನಂದನ್ ಮೂರ್ತಿ ಸೂಚನೆ ನೀಡಿದ್ದಾರೆ.

**<><*<><>*><>**

ಇತ್ತೀಚಿನ ದಿನಗಳಲ್ಲಿ ಯುವಕರಲ್ಲಿ ಮಾನವೀಯ ಮೌಲ್ಯಗಳು ಕಾಣೆಯಾಗುತ್ತಿದೆ ಎಂದು ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್‌ದಾಸ್ ಕಳವಳ ವ್ಯಕ್ತಪಡಿಸಿದರು. ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಮಂಗಸಂದ್ರ ಸ್ನಾತಕೋತ್ತರ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ಡಾ.ಬಿ.ಆರ್.ಅಂಬೇಡ್ಕರ್ ೧೩೩ನೇ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಯುವಕರು ಬುದ್ಧಿವಂತರಾಗುತ್ತಿದ್ದಾರೆಯೇ ಹೊರತು ಮಾನವೀಯ ಗುಣಗಳು ಅವರಲ್ಲಿ ಕಾಣುತ್ತಿಲ್ಲ ಎಂದರು. ಬಹುತೇಕರಲ್ಲಿ ಅಂಬೇಡ್ಕರ್ ಎಂದರೆ ಮೀಸಲಾತಿಯೆಂಬ ತಪ್ಪು ಕಲ್ಪನೆಯಿದ್ದು, ಅವರು ಯಾವುದೇ ಜಾತಿ, ಧರ್ಮ, ವರ್ಗಕ್ಕೆ ಸೇರಿದರಲ್ಲ ಎಂದು ಹೇಳಿದರು.

**<><*<><>*><>**

ಹುಬ್ಬಳ್ಳಿಯಲ್ಲಿ ವಿದ್ಯಾರ್ಥಿನಿ ನೇಹಾಳ ಸಾವಿನ ಬಗ್ಗೆ ನಿಷ್ಪಕ್ಷಪಾತ, ನಿಖರವಾದ ತನಿಖೆ ನಡೆಸಿ, ಸೂಕ್ತ ನ್ಯಾಯ ಒದಗಿಸಲಾಗುವುದು ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ. ಮೃತ ನೇಹಾ ನಿವಾಸಕ್ಕೆ ಭೇಟಿ ನೀಡಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿ ಅವರು, ಇದರಲ್ಲಿ ರಾಜಕೀಯ ಮಾಡುವ ಅವಶ್ಯಕತೆ ಇಲ್ಲ ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೦ ಕ್ಕೆ <>*><>**